ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 07/1/2020

# ರಾಜ್ಯಕ್ಕೆ 1869.85 ಕೋಟಿ ಬಿಡುಗಡೆ

## 2ನೇ ಕಂತಿನ ನೆರೆ ಪರಿಹಾರ

ಬೆಂಗಳೂರು: ನೆರೆ ಪರಿಹಾರದ ಎರಡನೇ ಕಂತಿನ ಹಣವಾಗಿ ಕೇಂದ್ರ ಸರ್ಕಾರ 1,869.85 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ರಾಜ್ಯದಲ್ಲಿನ ಪ್ರವಾಹದ ನಷ್ಟದ ಬಗ್ಗೆ ಪ್ರಧಾನಿ ಮೋದಿ ಅವರಿಗೆ ತಿಳಿಸಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, 50 ಸಾವಿರ ಕೋಟಿ ರೂ. ಪರಿಹಾರ ನೀಡುವಂತೆ ಮನವಿ ಮಾಡಿದ್ದರು.

ನೆರೆ ಪರಿಹಾರದ ಮೊದಲ ಕಂತಿನ ಪರಿಹಾರವಾಗಿ 1200 ಕೋಟಿ ರೂ. ಬಿಡುಗಡೆ ಮಾಡಿದ್ದ ಕೇಂದ್ರ ಸರ್ಕಾರ ಇದೀಗ ಎರಡನೇ ಕಂತು 1869.85 ಕೋಟಿ ರೂ. ಬಿಡುಗಡೆಗೊಳಿಸಲು ನಿರ್ಧರಿಸಿದೆ. ಇದರಿಂದಾಗಿ ಒಟ್ಟಾರೆ ರಾಜ್ಯಕ್ಕೆ 3069.85 ಕೋಟಿ ರೂ. ಪರಿಹಾರ ಬಂದಂತಾಗಿದೆ.

ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ದೇಶದ ವಿವಿಧ ರಾಜ್ಯಗಳಿಗೆ 2019 ನೇ ಸಾಲಿನ ಬರ ಹಾಗೂ ಅತಿವೃಷ್ಟಿ ಪರಿಹಾರ ಬಿಡುಗಡೆ ಮಾಡಲಾಗಿದೆ. ರಾಜ್ಯದಲ್ಲಿ ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳಿನಲ್ಲಿ ಉಂಟಾಗಿದ್ದ ಪ್ರವಾಹದಿಂದ ಸುಮಾರು 30 ಸಾವಿರ ಕೋಟಿ ರೂ. ನಷ್ಟವಾಗಿತ್ತು. ವಿಶೇಷ ಪರಿಹಾರ ನೀಡುವಂತೆ ಹಲವು ಬಾರಿ ರಾಜ್ಯ ಸರ್ಕಾರ ಮನವಿ ಮಾಡಿತ್ತು. ▶ 6ನೇ ಪುಟಕ್ಕೆ

ಭತ್ತಕ್ಕೆ ಬೆಂಬಲ ಬೆಲೆ »6

2